ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ-

ಪ್ರತಿವಾದಿ ಪತ್ರ ತಯಾರಿಸಿಸಲು ವಕೀಲರಿಗೆ ನಾನೇ ಮಾಹಿತಿ ನೀಡಿರುತ್ತೇನೆ. ವಾದಿರವರ ಬಳಿ ನಾವು 35 ಲಕ್ಷ ಹಣವನ್ನು ಬಡ್ಡಿಗೆ ಸಾಲ ಪಡೆದುಕೊಂಡಿದ್ದೆವು. 35 ಲಕ್ಷ ಹಣವನ್ನು ಬಡ್ಡಿಗಾಗಿ ಪಡೆದಿರುತ್ತೇವೆ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲೆ ಹಾಜರುಪಡಿಸಿರುವುದಿಲ್ಲ ಆದರೆ ಬರಿ ಬಾಯಿ ಮಾತಿನಲ್ಲಿ ಮಾತುಕತೆಯಾಗಿರುತ್ತದೆ. ಸಾಕ್ಷಿ ಪ್ರಮಾಣ ಪತ್ರದಲ್ಲಿ ತಿಂಗಳಿಗೆ ಶೇಕಡ 3 ರಂತೆ ವಾದಿಗೆ ಬಡ್ಡಿ ಹಣವನ್ನು ಪಾವತಿಸುತ್ತಿದ್ದೆವು ಎಂದು ತಿಳಿಸಿದ್ದು ಆ ಬಗ್ಗೆ ದಾಖಲೆ ಇರುವುದಿಲ್ಲ. ನಾನು ಮತ್ತು ನನ್ನ ಗಂಡ ವಾದಿಗೆ ದಾವಾ ಆಸ್ತಿಯನ್ನು ಮಾರಾಟ ಮಾಡಲು ಒಪ್ಪಿ ಕರಾರು ಪತ್ರ ವನ್ನು ಬರೆದುಕೊಟ್ಟಿದ್ದೆವು ಎಂದರೆ ಸರಿಯಲ್ಲ. 35 ಲಕ್ಷ ಹಣವನ್ನು ಸಾಲ ವಾಗಿ ಬಡ್ಡಿಗೆ ಪಡೆದುಕೊಂಡಿರುವ ಬಗ್ಗೆ ನಮ್ಮ ವಕೀಲರಿಗೆ ತಿಳಿಸಿರುತ್ತೇವೆ.

ಸಾಕ್ಷಿಗೆ ನಿಪಿ-1 ನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿ ಇರುವ ತಮ್ಮ ಸಹಿಗಳನ್ನು ನೋಡಿ ಗುರುತಿಸಿದ್ದು, ಮೊದಲನೇ ಪುಟದಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಐ) ಎಂದು ಗುರುತಿಸಲಾಯಿತು. ದಾವಾ ಆಸ್ತಿ ಅಲ್ಲದೆ ಬೇರೆ ಆಸ್ತಿಗಳು ಸಹ ನನ್ನ ಗಂಡನಿಗೆ ಇದ್ದರೂ ಸಹ ನ್ಯಾಯಾಲಯದಲ್ಲಿ ದಾವಾ ಆಸ್ತಿ ಅಲ್ಲದೆ ಬೇರೆ ಆಸ್ತಿಗಳು ಇಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿ ರವರು ಉಳಿಕೆ ಹಣವನ್ನು 15 ಲಕ್ಷ ಹಣವನ್ನು ನಮಗೆ ನೀಡಿ ಕ್ರಯ ಪತ್ರ ಬರೆಸಿಕೊಳ್ಳಲು ತಯಾರು ಇದ್ದರೂ ಸಹ ಬರೆದುಕೊಡದೆ ಸುಳ್ಳು ಸಾಕ್ಷಿ

ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಯಜಮಾನರು ಕಾಣೆಯಾಗಿಲ್ಲದೇ ಇದ್ದರೂ ಸಹ ಕ್ರಯ ಪತ್ರವನ್ನು ಬರೆದುಕೊಡುವುದನ್ನು ತಪ್ಪಿಸಿಕೊಳ್ಳಲು ನನ್ನ ಕಡೆಯಿಂದ ಸುಳ್ಳು ಸಾಕ್ಷಿ ನುಡಿಸಿರುತ್ತಾರೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ- ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.